2010

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಚಿಕ್ಕಮಗಳೂರು ಮಹಾಯೋಜನೆ (ಪರಿಷ್ಕೃತ-I) 2021ನ್ನು ಸರ್ಕಾರದ ಅಂತಿಮ ಅನುಮೋದನೆಗೆ ನೀಡುವ ಕುರಿತು.

ಓದಲಾಗಿದೆ:1)ಸರ್ಕಾರದ ಆದೇಶ ಸಂ.ನಅಇ 773 ಮೈಅಪ್ರಾ 2008 ಬೆಂಗಳೂರು ದಿನಾಂಕ:31-12-2008.

2)ಚಿಕ್ಕಮಗಳೂರು ನಗರಾಭಿವೃದ್ಧಿ ಪ್ರಾಧಿಕಾರದ ಪತ್ರ ಸಂ.ನಪ್ರಾಚಿ: ಚಿಮ:ಮ.ಯೋ.ಅ:566:2009-10 ದಿ:22-07-2010.

3) ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿಯ ಕಡತ ಸಂ.ನಯೋಉನಿ:56/ಚಿಕ್ಕಮಗಳೂರು ಮ.ಯೋ.ಪ-1: ಅಂ:2010 ರಲ್ಲಿ ನಗರ ಯೋಜನಾ ನಿರ್ದೇಶಕರು ನೀಡಿರುವ ಅಭಿಪ್ರಾಯ ದಿ:23.8.2010.

ಪ್ರಸ್ತಾವನೆ:

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ಚಿಕ್ಕಮಗಳೂರು ಜಿಲ್ಲೆ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಚಿಕ್ಕಮಗಳೂರು ನಗರಾಭಿವೃದ್ಧಿ ಪ್ರಾಧಿಕಾರವು ಚಿಕ್ಕಮಗಳೂರು ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ಪರಿಷ್ಕೃತ-I) ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(1)ರನ್ವಯ ಅಗತ್ಯ ಕ್ರಮ ಜರುಗಿಸಿ, ಮಹಾಯೋಜನೆ (ಪರಿಷ್ಕೃತ-I)ಯ ನಕ್ಷೆಗಳಲ್ಲಿ ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3)ರ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿಯ ಕಡತದಲ್ಲಿ ಚಿಕ್ಕಮಗಳೂರು ಸ್ಥಳೀಯ ಯೋಜನಾ ಪ್ರದೇಶದ ಜನಸಂಖ್ಯೆಯು 2001ರಲ್ಲಿ 113503 ಇದ್ದು, 2021ರಲ್ಲಿ 1.75 ಲಕ್ಷಗಳಿಗೆ ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾಯೋಜನೆ (ಪರಿಷ್ಕೃತ- I) ಯನ್ನು ರೂಪಿಸಲಾಗಿದೆ. ಚಿಕ್ಕಮಗಳೂರು ಸ್ಥಳೀಯ ಯೋಜನಾ ಪ್ರದೇಶದ 6630.88 ಹೆಕ್ಟೇರ್ ಪ್ರದೇಶದಲ್ಲಿ ಒಟ್ಟು 2848.32 ಹೆಕ್ಟೇರ್ ಪ್ರದೇಶವನ್ನು ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಮಹಾಯೋಜನೆಯನ್ನು ತಯಾರಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 12ರಲ್ಲಿನ ಅಂಶಗಳನ್ನು ಪರಿಗಣಿಸಿ ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಾಗಿ ಪ್ರಸ್ತಾಪಿಸಿರುವ 2848.32 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 1377.75 ಹೆಕ್ಟೇರ್ (ಶೇಕಡ 48.37), ವಾಣಿಜ್ಯಕ್ಕಾಗಿ 119.77 ಹೆಕ್ಟೇರ್ (ಶೇಕಡ 4.21), ಕೈಗಾರಿಕೆಗಾಗಿ 123.22 ಹೆಕ್ಟೇರ್ (ಶೇಕಡ 4.33), ಸಾರ್ವಜನಿಕ:ಅರೆ ಸಾರ್ವಜನಿಕ ವಲಯಕ್ಕಾಗಿ 216.65 ಹೆಕ್ಟೇರ್ (ಶೇಕಡ 7.61), ಉದ್ಯಾನವನ:ಬಯಲು ಜಾಗೆಗಳಿಗೆ 276.61 ಹೆಕ್ಟೇರ್ (ಶೇಕಡ 9.71) ಹಾಗೂ ನಾಗರೀಕ ಸೌಲಭ್ಯಕ್ಕಾಗಿ 23.73 ಹೆಕ್ಟೇರ್ (ಶೇಕಡ 0.83) ಹಾಗೂ ಸಾರಿಗೆ ಮತ್ತು ಸಂಪರ್ಕಕ್ಕಾಗಿ 655.91 ಹೆಕ್ಟೇರ್ (ಶೇ.23.02) ಜಲಾವೃತ ಪ್ರದೇಶಕ್ಕಾಗಿ 54.68 (ಶೇ.1.92) ಪ್ರದೇಶವನ್ನು ನಿಗದಿಪಡಿಸಲಾಗಿದೆ. ಮಹಾಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿರುತ್ತದೆ.

ಚಿಕ್ಕಮಗಳೂರು ತಾಲ್ಲೂಕು ಉಪ್ಪಳಿ ಗ್ರಾಮದ ಸರ್ವೆ ನಂ.126/ಪಿ ರಲ್ಲಿ ಹಾಲಿ ಅನುಮೋದಿತ ವಿನ್ಯಾಸದ ಮೇಲೆ ಹೊಸದಾಗಿ 9.0 ಮೀ. ಅಗಲದ ರಸ್ತೆಯನ್ನು ತಾತ್ಕಾಲಿಕವಾಗಿ ಅನುಮೋದನೆಯಾದ ಮಹಾಯೋಜನೆ (ಪರಿಷ್ಕೃತ-I) ರಲ್ಲಿ ಪ್ರಸ್ತಾಪಿಸಿದ್ದು ಈಗಾಗಲೇ ಸದರಿ ನಿವೇಶನದಲ್ಲಿ ಕಟ್ಟಡ ನಿರ್ಮಿಸಲು ನಗರಸಭೆ ಚಿಕ್ಕಮಗಳೂರು ಇವರು ದಿ:25-2-2010ರಂದು ಪರವಾನಗಿ (Licence) ನೀಡಿದ್ದು ಕಟ್ಟಡ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದ್ದು ಸದರಿ ವಿಷಯದ ಬಗ್ಗೆ ದಿ:7-7-2010 ರಂದು ನಡೆದ ಚಿಕ್ಕಮಗಳೂರು ನಗರಾಭಿವೃದ್ಧಿ ಪ್ರಾಧಿಕಾರದ ಸಭೆಯಲ್ಲಿ ಸದರಿ ಸರ್ವೆ ನಂ.126/ಪಿ ರಲ್ಲಿ ಅನುಮೋದಿತ ವಿನ್ಯಾಸದಲ್ಲಿ ಮಹಾಯೋಜನೆಯಲ್ಲಿ ಹೊಸದಾಗಿ ಪ್ರಸ್ತಾಪಿಸಿರುವ ರಸ್ತೆಯನ್ನು ರದ್ದುಪಡಿಸಲು ತೀರ್ಮಾನಿಸಿರುತ್ತದೆ. ಸದರಿ ರಸ್ತೆಯನ್ನು ರದ್ದುಪಡಿಸುವ ಷರತ್ತಿಗೊಳಪಡಿಸಿ ಮಹಾಯೋಜನೆ (ಪರಿಷ್ಕೃತ-I)ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3)ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಅದರಂತೆ ಪ್ರಸ್ತಾವನೆಯನ್ನು ಪರಿಶೀಲಿಸಿ, ನಂತರ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ನಅಇ554 ಮೈಅಪ್ರಾ 2010 ಬೆಂಗಳೂರು ದಿನಾಂಕ:07-12-2010**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಚಿಕ್ಕಮಗಳೂರು ಸ್ಥಳೀಯ ಯೋಜನಾ ಪ್ರದೇಶಕ್ಕೆ ಮಹಾಯೋಜನೆ (ಪರಿಷ್ಕೃತ-I)ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3)ರನ್ವಯ ಸರ್ಕಾರವು ಅಂತಿಮ ಅನುಮೋದನೆಯನ್ನು ಕೆಳಕಂಡ ಷರತ್ತಿನೊಂದಿಗೆ ನೀಡಲಾಗಿದೆ. ಮಹಾಯೋಜನೆ (ಪರಿಷ್ಕೃತ-I)ಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಷರತ್ತು: 1.ಉಪ್ಪಳ್ಳಿ ಗ್ರಾಮದ ಸ.ನಂ.126/ಪಿ ರಲ್ಲಿ ಅನುಮೋದಿತ ವಿನ್ಯಾಸದಲ್ಲಿ ಮಹಾಯೋಜನೆಯಲ್ಲಿ ಹೊಸದಾಗಿ ಪ್ರಸ್ತಾಪಿಸಿರುವ ರಸ್ತೆಯನ್ನು ರದ್ದುಪಡಿಸತಕ್ಕದ್ದು.

2.ಈ ಆದೇಶದ ದಿನಾಂಕದಿಂದ ಎರಡು ವರ್ಷಗಳವರೆಗೆ ಪ್ರಾಧಿಕರವು ಯಾವುದೇ ಭೂ ಉಪಯೋಗ ಬದಲಾವಣೆಯನ್ನು ಸರ್ಕಾರಕ್ಕೆ ಸಲ್ಲಿಸಕೂಡದು.

3.ಪ್ರಸ್ತಾವಿತ ಮಹಾಯೋಜನೆಗೆ ರೂಪಿಸಿರುವ ವಲಯ ನಿಯಮಾವಳಿಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

7/12/10

(ಎಂ.ಎಂ.ಹಿರೇಮಠ)

ಸರ್ಕಾರದ ಅಧೀನ ಕಾರ್ಯದರ್ಶಿ,